ಪಿ.ಡಬ್ಲ್ಯು-4

ದಿನಾಂಕಃ 05-05-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲುಃ- ಆರೋಪಿ ಪರವಾಗಿ ಶ್ರೀ. ಎಸ್.ಆರ್.ಆರ್. ವಕೀಲರಿಂದಃ-**

ಚಾಸಾ.1 ನನ್ನ ಮಾವ. ಚಾಸಾ.2 ಮತ್ತು 3 ರವರು ನನ್ನ ಸಂಬಂಧಿಕರು. ಗಲಾಟೆ ಆದ ಮಾರನೇ ದಿನ ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದರು. ಆ ಗಲಾಟೆಯನ್ನು ನಾನು ನೋಡಿಲ್ಲ ಎಂದರೆ ಸರಿಯಲ್ಲ. ಆ ದಿನ ಪೊಲೀಸರು ನನ್ನ ಸಮಕ್ಷಮ ಯಾವುದೇ ಬರವಣಿಗೆ ಮಾಡಿಲ್ಲ ಎಂದರೆ ಸರಿ. ಆ ಸ್ಥಳ ಪಂಚನಾಮೆಗೆ ಬೇರೆ ಯಾರು ಸಹಿ ಮಾಡಿದ್ದಾರೆ ಎಂಬುದು ನನಗೆ ಗೊತ್ತಿಲ್ಲ. ಆ ದಾಖಲೆಗೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿದ್ದೇನೆ ಎಂದರೆ ಸರಿಯಲ್ಲ. ಆ ದಿನ ಯಾವುದೇ ಗಲಾಟೆ ಆಗಿಲ್ಲ, ಆರೋಪಿತರು ಚಾಸಾ.1 ರವರನ್ನು ಅವಾಚ್ಯ ಶಬ್ದಗಳಿಂದ ಬೈದಿಲ್ಲ, ಚಾಸಾ.1 ರವರ ಎದೆಗೆ ಹೊಡೆದು ಪ್ರಾಣ ಬೆದರಿಕೆ ಹಾಕಿಲ್ಲ ಎಂದರೆ ಸರಿಯಲ್ಲ. ಈ ಬಗ್ಗೆ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಆ ದಿನ ಪೊಲೀಸರು ಸ್ಥಳದಲ್ಲಿ ನನ್ನ ಸಹಿ ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ.1 ನನ್ನ ಮಾವನಾದ ಕಾರಣ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ- ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ನುಡಿದಂತೆ ಗಣಕೀಕೃತಗೊಳಿಸಲಾಯಿತು)

ಓ.ಹೇ.ಸಾ.ಸ.ಇ.ಒ.

ಪ್ರಧಾನ ಹಿರಿಯ ಸಿವಿಲ್ ಜಡ್ಜ್
ಮತ್ತು ಜೆಎಂಎಫ್‌ಸಿ, ಮಧುಗಿರಿ